# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 957 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ .ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14/03/2025 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಅಸಂಘಟಿತ ಕಾರ್ಮಿಕರು (ಕೂಲಿ ಕಾರ್ಮಿಕರು ಕಟ್ಟಡ ಕಾರ್ಮಿಕರು, ಕೃಷಿ ಕಾರ್ಮಿಕರು) ಇದ್ದಾರೆ (ತಾಲ್ಲೂಕುವಾರು ವಿವರ ನೀಡುವುದು) | ವಿಜಯಪುರ ಜಿಲ್ಲೆಯಲ್ಲಿ ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ, ಈವರೆಗೆ ಕಾರ್ಮಿಕ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ, ಅಸಂಘಟಿತ ಕಾರ್ಮಿಕರ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ.<br><br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವ ಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿತರಣೆ ಸಂಬಂಧವಾಗಿ ಫಲಾನುಭವಿಗಳಾಗಿ/ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರವನ್ನು ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಒದಗಿಸಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>ಈ ಮಂಡಳಿಯಲ್ಲಿ ವಿಜಯಪುರ ಜಿಲ್ಲೆಯಲ್ಲಿ ನೋಂದಣಿಯಾದ ಕಟ್ಟಡ ಕಾರ್ಮಿಕರ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ. |

| ಕ್ರ. ಸಂ | ತಾಲೂಕಿನ ಹೆಸರು | ನೋಂದಾಯಿತ ಕಾರ್ಮಿಕರ ಸಂಖ್ಯೆ |
|---|---|---|
| 1 | ವಿಜಯಪುರ | 19739 |
| 2 | ಸಿಂಧಗಿ | 11859 |
| 3 | ಇಂಡಿ | 4347 |
| 4 | ಮುದ್ದೇಬಿಹಾಳ | 10884 |
| 5 | ಬಸವನ ಬಾಗೇವಾಡಿ | 11311 |
| | **ಒಟ್ಟು** | **58140** |



ile No. LD-LET/101/2025-LD_DO_3-LABOUR SEC (Computer No. 1706680)

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು, ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದಿ ಮಂಡಳಿ ಹಾಗೂ ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್ ನಲ್ಲಿ ನೋಂದಾಯಿಸುತ್ತಿದ್ದು, ಅಸಂಘಟಿತ ಕಾರ್ಮಿಕರ ತಾಲ್ಲೂಕುವಾರು ಮಾಹಿತಿ ಲಭ್ಯವಿರುವುದಿಲ್ಲ. ಆದರೆ ಜಿಲ್ಲಾವಾರು ಮಾಹಿತಿ ಲಭ್ಯವಿದ್ದು, ವಿಜಯಪುರ ಜಿಲ್ಲೆಗೆ ಸಂಬಂಧಸಿದಂತೆ ವಿವರ ಕೆಳಕಂಡಂತಿದೆ;

| | | |
|---|---|---|
| 01 | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೊಜನೆ | 64,683 |
| 02 | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | 796 |
| 03 | ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ | 159 |
| 04 | ಇ-ಶ್ರಮ್ ಕಾರ್ಯಕ್ರಮದಡಿ ಅಸಂಘಟಿತ ಕಾರ್ಮಿಕರ ನೋಂದಣಿ | 5,87,838 |
| 05 | ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ (ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ) | 31,846 |
| | **ಒಟ್ಟು** | **6,85,322** |

ಮಂಡಳಿಯು ಜಾರಿಗೊಳಿಸುತ್ತಿರುವ ಇ-ಶ್ರಮ್ ಕಾರ್ಯಕ್ರಮದಡಿ ಕೃಷಿ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್ ಮೂಲಕ ನೋಂದಾಯಿಸಲಾಗಿದ್ದು ಈವರೆಗೆ ವಿಜಯಪುರ ಜಿಲ್ಲೆಯಲ್ಲಿ ಒಟ್ಟು 3,91,521 ಕೃಷಿ ಕಾರ್ಮಿಕರು ಹಾಗೂ ಕೃಷಿ ಸಂಬಂಧಿತ ಕೂಲಿ ಕಾರ್ಮಿಕರನ್ನು ನೋಂದಾಯಿಸಲಾಗಿದೆ.

| | | |
|---|---|---|
| ಆ) | ಇವರೆಲ್ಲರೂ ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ಎಂಬುದನ್ನು ಸರ್ಕಾರ ಹೇಗೆ ಖಚಿತಪಡಿಸುತ್ತಿದೆ; ಕಾಲಕಾಲಕ್ಕೆ ಪರಿಶೀಲನೆ ನಡೆಸುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಫಲಾನುಭವಿಗಳು ಪಡೆಯುತ್ತಿರುವ ಬಗ್ಗೆ ಕಾಲ ಕಾಲಕ್ಕೆ ಪರಿಶೀಲನೆ ನಡೆಸುತ್ತಿದ್ದು, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಿ ಆ ಬಗ್ಗೆ ಖಚಿತಪಡಿಸಿಕೊಳ್ಳಲು ಅನುಸರಿಸುತ್ತಿರುವ ಕ್ರಮದ ವಿವರ ಈ ಕೆಳಕಂಡಂತಿವೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>1. ಈ ಮಂಡಳಿಯಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಅವರ ಸಾಮಾಜಿಕ ಮತ್ತು ಕಲ್ಯಾಣ ಭದ್ರತೆಗಾಗಿ ವಿವಿಧ ಬಗೆಯ ಘಟನಾಧಾರಿತ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>2. ನೋಂದಾಯಿತ ಫಲಾನುಭವಿಗಳು ಮಂಡಳಿಯ ತಂತ್ರಾಂಶದಲ್ಲಿ (kbocwwb.karnataka.gov.in) ಅರ್ಜಿ ಸಲ್ಲಿಸಿ ಮಂಡಳಿಯಿಂದ ಧನಸಹಾಯವನ್ನು ಪಡೆದುಕೊಳ್ಳುತ್ತಿದ್ದಾರೆ.<br>3. ಮಂಡಳಿಯ ತಂತ್ರಾಂಶದಲ್ಲಿ ಸ್ವೀಕೃತಗೊಂಡ ಸೌಲಭ್ಯದ ಅರ್ಜಿಗಳನ್ನು ಸಕಾಲ ಕಾಯ್ದೆ ಕಾಲಮಿತಿಯೊಳಗೆ ನಿಯಮಾನುಸಾರ ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಮಂಡಳಿಯಲ್ಲಿ ನೋಂದಣಿಯಾಗಿರುವ ಅಸಂಘಟಿತ ಕಾರ್ಮಿಕ ಫಲಾನುಭವಿಗಳು ಸಲ್ಲಿಸಿರುವ ಕ್ಲೇಮ್ ಅರ್ಜಿಗಳನ್ನು ಕ್ಷೇತ್ರದ ಅಧಿಕಾರಿಗಳ ಮುಖಾಂತರ ಪರಿಶೀಲಿಸಿ ಅರ್ಹ ಫಲಾನುಭವಿಗಳಿಗೆ ಪರಿಹಾರವನ್ನು ನೀಡಲಾಗುತ್ತಿದೆ. ಆದರೆ ಅರ್ಹ ಫಲಾನುಭವಿಗಳು ಪರಿಹಾರದಿಂದ ವಂಚಿತರಾಗಿರುವ ಕುರಿತು ಈವರೆಗೆ ಮಂಡಳಿಯಲ್ಲಿ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| ಇ) | BOCW (Building & Other Construction Workers) ಬೋರ್ಡ್‌ನಿಂದ ವಿಜಯಪುರ ಜಿಲ್ಲೆಯಲ್ಲಿ ಲಾಭ ಪಡೆಯುತ್ತಿರುವ ಕಾರ್ಮಿಕರ ಸಂಖ್ಯೆಯೆಷ್ಟು; ಈ ಎಲ್ಲಾ ಕಾರ್ಮಿಕರಿಗೆ ನಿಗದಿತ ವೇತನ (Minimum Wages) ನೀಡಲಾಗುತ್ತಿದೆಯೇ; ತಪಾಸಣೆ ನಡೆಸಲು ಸರ್ಕಾರ ಯಾವುದಾದರು ಸಮಿತಿಯನ್ನು ನೇಮಿಸಿರುವುದೇ; (ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ವಿಜಯಪುರ ಜಿಲ್ಲೆಯಲ್ಲಿ 12,486 ನೋಂದಾಯಿತ ಫಲಾನುಭವಿಗಳು ಸೌಲಭ್ಯಗಳನ್ನು ಪಡೆದಿರುತ್ತಾರೆ.<br><br>ಕಾರ್ಮಿಕರಿಗೆ ನಿಗಧಿತ ವೇತನ (ಕನಿಷ್ಠ ವೇತನಕ್ಕಿಂತ ಕಡಿಮೆ ಇಲ್ಲದಂತೆ) ನೀಡುವ/ನೀಡದಿರುವ ಬಗ್ಗೆ ಇಲಾಖೆಯ ಅಧಿಕಾರಿಗಳು ಕಾಲ ಕಾಲಕ್ಕೆ ತಪಾಸಣೆ ನಡೆಸುತ್ತಿದ್ದು, ಕಾರ್ಮಿಕರು ಕನಿಷ್ಠ ವೇತನಕ್ಕಿಂತ ಕಡಿಮೆ ವೇತನ ಪಡೆಯುತ್ತಿದ್ದಲ್ಲಿ ಅಥವಾ ನಿಗಧಿತ ಸಮಯಕ್ಕೆ ವೇತನ ಪಡೆಯದಿದ್ದಲ್ಲಿ ಅಂತಹ ಕಾರ್ಮಿಕರಿಗೆ ವೇತನ ಪಾವತಿಸುವ ಮಾಲೀಕರು/ಗುತ್ತಿಗೆದಾರರ ವಿರುದ್ಧ ಸೂಕ್ತ ಪ್ರಾಧಿಕಾರದ ಮುಂದೆ ಪ್ರಕರಣ ದಾಖಲಿಸುವ ಕ್ರಮ ಜರುಗುತ್ತಿದೆ. ಸದರಿ ಪ್ರಕ್ರಿಯೆಯು ಇಲಾಖೆಯ ಮೂಲ ಕೆಲಸವಾಗಿರುವುದರಿಂದ ಈ ಕಾರ್ಯಕ್ಕಾಗಿ ಮತ್ತೊಂದು ಸಮಿತಿಯನ್ನು ನೇಮಿಸುವ ಯಾವುದೇ ಉದ್ದೇಶ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ. |
| ಈ) | ವಿಜಯಪುರ ಜಿಲ್ಲೆಯ ಕೈಗಾರಿಕಾ ಕಾರ್ಮಿಕರಿಗೆ ಸರ್ಕಾರಿ ಯೋಜನೆಗಳ ಪ್ರಯೋಜನ ಪಡೆಯಲು ಇ-ಶ್ರಮ ಇಲಾಖೆಯಿಂದ ವಿಶೇಷ ಶಿಬಿರಗಳು ಆಯೋಜಿಸಲಾಗುತ್ತದೆಯೇ ; ESI (Employees State Insurance) ಸೌಲಭ್ಯಗಳು ವಿಜಯಪುರದ ಎಲ್ಲಾ ಅರ್ಹ ಕಾರ್ಮಿಕರಿಗೆ ತಲುಪುತ್ತಿದೆಯೇ? (ಮಾಹಿತಿ ನೀಡುವುದು) | ಕೈಗಾರಿಕೆಗಳಲ್ಲಿ ಕಾನೂನು ಬದ್ಧ ಸೌಲಭ್ಯಗಳನ್ನು ಹೊಂದಿರದೆ ಕಾರ್ಯನಿರ್ವಹಿಸುವ ಕಾರ್ಮಿಕರು ಅಸಂಘಟಿತ ಕಾರ್ಮಿಕರಾಗಿದ್ದು, ಅವರನ್ನು ಸೇರಿದಂತೆ ಇನ್ನಿತರ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದ್ದು, ಈ ಸಂಬಂಧ ಮಂಡಳಿಯ ವತಿಯಿಂದ ಅನೇಕ ನೋಂದಣಿ ಶಿಬಿರಗಳನ್ನು ಆಯೋಜಿಸಲಾಗಿದೆ.<br><br>ESI (Employee State Insurance) ಸೌಲಭ್ಯಗಳು ವಿಜಯಪುರದ ಎಲ್ಲಾ ಅರ್ಹ ಕಾರ್ಮಿಕರಿಗೆ ತಲುಪುತ್ತಿರುತ್ತದೆ. |

**ಕಾಇ 101 ಎಲ್ ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**